**All India Radio: Bangalore**
**National Bulletin In Kannada**
**18.05.2026 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**18.05.2026 19.35 hrs**

---

ಮುಖ್ಯಾಂಶಗಳು

೧. ನಾರ್ವೆ ಪ್ರಧಾನಿಯೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ; ಉಭಯ ದೇಶಗಳ ನಡುವೆ ಸಹಕಾರ ಬಲವರ್ಧನೆಗೆ ಸಮ್ಮತಿ

೨. 'ಒಂದು ರಾಷ್ಟ್ರ ಒಂದು ಚುನಾವಣೆ' ಪ್ರಕ್ರಿಯೆಯಿಂದ ದೊಡ್ಡ ಪ್ರಮಾಣದಲ್ಲಿ ವೆಚ್ಚ ಕಡಿತ; ಜೆಪಿಸಿ ಅಧ್ಯಕ್ಷ ಪಿ.ಪಿ.ಚೌಧರಿ

೩. ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ; ಮಹಾರಾಷ್ಟ್ರದಲ್ಲಿ ತರಬೇತಿ ಕೇಂದ್ರದ ನಿರ್ದೇಶಕನ ಬಂಧನ

೪. ಐಪಿಎಲ್ ಟಿ-೨೦ ಕ್ರಿಕೆಟ್; ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಟಾಸ್ ಗೆದ್ದ ಚೆನ್ನೈ ಸೂಪರ್ ಕಿಂಗ್ಸ್ ಬ್ಯಾಟಿಂಗ್ ಆಯ್ಕೆ

---

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಓಸ್ಲೋದಲ್ಲಿ ನಾರ್ವೆ ಪ್ರಧಾನಿ ಜೋನಾಸ್ ಗಹರ್ ಸ್ಟೋರ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು.

ಮಾತುಕತೆಯ ನಂತರ ಜಂಟಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿ ಪ್ರಧಾನಿ ನರೇಂದ್ರ ಮೋದಿ, ಕಳೆದ ವರ್ಷ ಜಾರಿಗೆ ಬಂದ ಭಾರತ-ಇಎಫ್‌ಟಿಎ ವ್ಯಾಪಾರ ಮತ್ತು ಆರ್ಥಿಕ ಪಾಲುದಾರಿಕೆ ಒಪ್ಪಂದವು ಭಾರತ ಮತ್ತು ನಾರ್ವೆ ನಡುವಿನ ಹಂಚಿಕೆಯ ಪ್ರಗತಿ ಮತ್ತು ಸಮೃದ್ಧಿಗೆ ನೀಲನಕ್ಷೆಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ಹೇಳಿದರು.

ಇಂಡೋ-ಪೆಸಿಫಿಕ್ ಸಾಗರ ಉಪಕ್ರಮಕ್ಕೆ ಸೇರುವ ನಾರ್ವೆಯ ನಿರ್ಧಾರವನ್ನು ಪ್ರಧಾನಿ ಸ್ವಾಗತಿಸಿದರು. ಎರಡು ಪ್ರಮುಖ ಕಡಲ ರಾಷ್ಟ್ರಗಳಾಗಿ, ಭಾರತ ಮತ್ತು ನಾರ್ವೆ ಕಡಲ ಆರ್ಥಿಕತೆ, ಕಡಲ ಭದ್ರತೆ ಮತ್ತು ಸಾಮರ್ಥ್ಯ ವೃದ್ಧಿಯಲ್ಲಿ ಸಹಕಾರವನ್ನು ಮತ್ತಷ್ಟು ಬಲಪಡಿಸುತ್ತವೆ ಎಂದು ಅವರು ತಿಳಿಸಿದರು.

ಇದಕ್ಕೂ ಮೊದಲು, ಪಂಚ ರಾಷ್ಟ್ರಗಳ ಪ್ರವಾಸದ ಭಾಗವಾಗಿ ನಾರ್ವೆಯ ಓಸ್ಲೋಗೆ ಆಗಮಿಸಿದ ಪ್ರಧಾನಿ ಅವರನ್ನು ಭಾರತೀಯ ಸಮುದಾಯದವರು ಆತ್ಮೀಯವಾಗಿ ಸ್ವಾಗತಿಸಿದರು. ಪ್ರಧಾನಿ ಮೋದಿ ಅವರು ನಾರ್ವೆಗೆ ಮೊದಲ ಬಾರಿಗೆ ಭೇಟಿ ನೀಡಿದ್ದಾರೆ. ಕಳೆದ ೪೩ ವರ್ಷಗಳಲ್ಲಿ ಭಾರತದ ಪ್ರಧಾನಿಯೊಬ್ಬರು ನಾರ್ವೆಗೆ ಭೇಟಿ ನೀಡಿರುವುದು ಇದೇ ಮೊದಲು.

ಪ್ರಧಾನಿ ನರೇಂದ್ರ ಮೋದಿ ಅವರು ಇಂದು, ನಾರ್ವೆ ರಾಜ ಐದನೇ ಹೆರಾಲ್ಡ್ ಮತ್ತು ರಾಣಿ ಸೋಂಜಾ ಅವರನ್ನು ಭೇಟಿ ಮಾಡಲಿದ್ದಾರೆ. ನಂತರ ಅವರು ಭಾರತ-ನಾರ್ವೆ ವ್ಯವಹಾರ ಮತ್ತು ಸಂಶೋಧನಾ ಶೃಂಗಸಭೆ ಉದ್ದೇಶಿಸಿ ಮಾತನಾಡಲಿದ್ದಾರೆ.

ನಾಳೆ, ಪ್ರಧಾನಿಯವರು ಮೂರನೇ ಭಾರತ-ನಾರ್ಡಿಕ್ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ.

ಭಾರತ ಮತ್ತು ಐದು ನಾರ್ಡಿಕ್ ದೇಶಗಳ ನಡುವಿನ ದ್ವಿಪಕ್ಷೀಯ ವ್ಯಾಪಾರವು ಪ್ರಸ್ತುತ ೧೯ ಶತಕೋಟಿ ಡಾಲರ್‌ಗಳಷ್ಟಿದೆ. ಇದರಲ್ಲಿ ನಾವೀನ್ಯತೆ, ರಕ್ಷಣೆ ಮತ್ತು ಜನರ ನಡುವಿನ ಸಂಪರ್ಕದಂತಹ ವ್ಯಾಪಕ ಶ್ರೇಣಿಯ ಕ್ಷೇತ್ರಗಳು ಸೇರಿವೆ. ಈ ಭೇಟಿಯು ನಾರ್ಡಿಕ್ ದೇಶಗಳೊಂದಿಗೆ ಭಾರತದ ಸೌಹಾರ್ದಯುತ ಸಂಬಂಧಗಳನ್ನು ಗಾಢವಾಗಿಸುವ ನಿರೀಕ್ಷೆಯಿದೆ.

---

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ವಿಯೆಟ್ನಾಂನ ಹನೋಯ್ ತಲುಪಿದ್ದಾರೆ. ಅವರು ಇಂದಿನಿಂದ ವಿಯೆಟ್ನಾಂ ಮತ್ತು ದಕ್ಷಿಣ ಕೊರಿಯಾಕ್ಕೆ ಎರಡು ರಾಷ್ಟ್ರಗಳ ಭೇಟಿಯಲ್ಲಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಸಚಿವ ರಾಜನಾಥ್ ಸಿಂಗ್, ಎರಡು ಏಷ್ಯಾ ರಾಷ್ಟ್ರಗಳಿಗೆ ಭೇಟಿಯ ಸಮಯದಲ್ಲಿ ಕಾರ್ಯತಂತ್ರದ ಮಿಲಿಟರಿ ಸಹಕಾರವನ್ನು ಮತ್ತಷ್ಟು ಬಲಗೊಳಿಸುವುದು, ರಕ್ಷಣಾ ಕೈಗಾರಿಕಾ ಪಾಲುದಾರಿಕೆಯನ್ನು ವಿಸ್ತರಿಸುವುದು, ಕಡಲ ಸಹಯೋಗವನ್ನು ಹೆಚ್ಚಿಸುವುದು ಹಾಗೂ ಇಂಡೋ-ಫೆಸಿಫಿಕ್ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಉತ್ತೇಜಿಸುವುದರ ಕಡೆಗೆ ಕೇಂದ್ರೀಕರಿಸಲಾಗುವುದು ಎಂದು ತಿಳಿಸಿದ್ದಾರೆ.

ವಿಯೆಟ್ನಾಂ ಭೇಟಿಯ ವೇಳೆ ರಾಜನಾಥ್ ಸಿಂಗ್ ಅವರು ವಿಯೆಟ್ನಾಂ ರಕ್ಷಣಾ ಸಚಿವ ಜನರಲ್ ಫಾನ್ ವ್ಯಾನ್ ಗಿಯಾಂಗ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

ದಕ್ಷಿಣ ಕೊರಿಯಾ ಪ್ರವಾಸದ ಸಂದರ್ಭದಲ್ಲಿ ಅಲ್ಲಿನ ರಕ್ಷಣಾ ಸಚಿವ ಅನ್ ಗ್ಯು-ಬಾಕ್ ಅವರೊಂದಿಗೆ ಮಾತುಕತೆ ನಡೆಸಲಿರುವ ರಾಜನಾಥ್ ಸಿಂಗ್, ರಕ್ಷಣಾ ಸಹಕಾರದ ಪ್ರಗತಿಯನ್ನು

ಪರಾಮರ್ಶಿಸಲಿದ್ದಾರೆ ಹಾಗೂ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ವಿಚಾರ ವಿನಿಮಯ ಮಾಡಲಿದ್ದಾರೆ.

---

ಸಂವಿಧಾನದ ೧೨೯ನೇ ತಿದ್ದುಪಡಿ ಮಸೂದೆ-೨೦೨೪ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನು ತಿದ್ದುಪಡಿ ಮಸೂದೆ-೨೦೨೪ ಕುರಿತ ಜಂಟಿ ಸಂಸದೀಯ ಅಧ್ಯಯನ ಸಮಿತಿಯು ಇಂದು ಬೆಂಗಳೂರಿನಲ್ಲಿ ಒಂದು ರಾಷ್ಟ್ರ ಒಂದು ಚುನಾವಣೆ' ಕುರಿತು ಸಂವಾದ ಏರ್ಪಡಿಸಿತ್ತು.

ಸಮಿತಿ ಅಧ್ಯಕ್ಷ ಪಿ.ಪಿ.ಚೌಧರಿ ಅವರು ಪದ್ಮ ಪ್ರಶಸ್ತಿ ಪುರಸ್ಕೃತರು ಹಾಗೂ ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿ, 'ಒಂದು ರಾಷ್ಟ್ರ ಒಂದು ಚುನಾವಣೆ' ಕುರಿತು ಅಭಿಪ್ರಾಯ ಸಂಗ್ರಹಿಸಿದರು.

ಸಂವಾದದಲ್ಲಿ ಮಾತನಾಡಿದ ಸಮಿತಿ ಅಧ್ಯಕ್ಷ ಪಿ.ಪಿ.ಚೌಧರಿ, ದೇಶದಲ್ಲಿ ಒಂದು ವರ್ಷಕ್ಕೆ ೫ ರಿಂದ ೬ ವಿಧಾನಸಭೆ ಚುನಾವಣೆಗಳು ನಡೆಯುತ್ತವೆ. ಇದರಿಂದ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ವಿವಿಧ ವಲಯಗಳ ಜನರ ಮೇಲೆ ಪರಿಣಾಮ ಬೀರುತ್ತಿದೆ. ಈ ಹಿನ್ನೆಲೆಯಲ್ಲಿ 'ಒಂದು ರಾಷ್ಟ್ರ ಒಂದು ಚುನಾವಣೆ' ಜಾರಿಯಾದಾಗ, ಶಿಕ್ಷಕರು, ಆರಕ್ಷಕರು, ಇತರ ಚುನಾವಣಾ ಸಿಬ್ಬಂದಿಯ ಹೊರೆ ಕಡಿಮೆಯಾಗುತ್ತದೆ ಎಂದು ಹೇಳಿದರು.

ಚುನಾವಣೆ ಸುರಕ್ಷಿತವಾಗಿ ನಡೆಯುವುದಕ್ಕೆ ಚುನಾವಣಾ ಆಯೋಗ, ಗೃಹ ಸಚಿವಾಲಯ, ಇವಿಎಂ ಯಂತ್ರಗಳ ಸಿದ್ಧತೆ, ಅಂಚೆ ಮತಗಳು ಹೀಗೆ ವಿವಿಧ ರೀತಿಯ ಸಹಯೋಗ ಅವಶ್ಯಕ. 'ಒಂದು ರಾಷ್ಟ್ರ ಒಂದು ಚುನಾವಣೆ'ಯಿಂದ ಚುನಾವಣೆಯ ವೆಚ್ಚ ಸಹ ದೊಡ್ಡ ಪ್ರಮಾಣದಲ್ಲಿ ತಗ್ಗಿಸಬಹುದು ಎಂದು ಅವರು ತಿಳಿಸಿದರು. ಇದೇ ವೇಳೆ ಪದ್ಮ ಪುರಸ್ಕೃತರು, ಮಾಧ್ಯಮ ಪ್ರತಿನಿಧಿಗಳು ತಮ್ಮ ಅಭಿಪ್ರಾಯಗಳನ್ನು ಮಂಡಿಸಿದರು.

---

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹಾರಾಷ್ಟ್ರದ ಲಾತೂರ್‌ನ ಆರ್‌ಸಿಸಿ ತರಬೇತಿ ಕೇಂದ್ರದ ನಿರ್ದೇಶಕ ಶಿವರಾಜ್ ಮೊಟೆಗಾಂವ್ಕರ್ ಅವರನ್ನು ಕೇಂದ್ರ ತನಿಖಾ ದಳ-ಸಿಬಿಐ ಬಂಧಿಸಿದೆ.

ನೀಟ್ ಪರೀಕ್ಷಾ ಹಗರಣದ ತನಿಖೆಯ ಭಾಗವಾಗಿ ಸಿಬಿಐ, ಶುಕ್ರವಾರ ಅವರನ್ನು ಸುಮಾರು ೧೧ ಗಂಟೆಗಳ ಕಾಲ ವಿಚಾರಣೆ ನಡೆಸಿತ್ತು. ವಿಚಾರಣೆ ನಂತರ ಸಿಬಿಐ ತಂಡ, ಲಾತೂರ್‌ನಲ್ಲಿರುವ ಅವರ ತರಬೇತಿ ಸಂಸ್ಥೆಯಲ್ಲಿ ಶೋಧ ನಡೆಸಿತು.

ಈ ವೇಳೆ ಪ್ರಮುಖ ದಾಖಲೆಗಳು, ಕಂಪ್ಯೂಟರ್‌ಗಳು ಮತ್ತು ಮೊಬೈಲ್ ಫೋನ್‌ಗಳನ್ನು ಅಧಿಕಾರಿಗಳು ವಶಪಡಿಸಿಕೊಂಡರು. ನಂತರ ಶಿವರಾಜ್ ಅವರನ್ನು ಪುಣೆಯ ಸಿಬಿಐ ಕಚೇರಿಗೆ ಕರೆದೊಯ್ಯಲಾಯಿತು. ಅಲ್ಲಿ ಹೆಚ್ಚಿನ ವಿಚಾರಣೆ ನಂತರ ಅವರನ್ನು ಬಂಧಿಸಲಾಗಿದೆ.

---

ಕೇರಳಂನ ೧೩ನೇ ಮುಖ್ಯಮಂತ್ರಿಯಾಗಿ ಹಿರಿಯ ಕಾಂಗ್ರೆಸ್ ನಾಯಕ ವಿ.ಡಿ.ಸತೀಸನ್ ಇಂದು ಪ್ರಮಾಣವಚನ ಸ್ವೀಕರಿಸಿದರು. ಇದರೊಂದಿಗೆ ಕಳೆದ ೧೦ ವರ್ಷಗಳ ಬಳಿಕ ಕೇರಳದಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಸರ್ಕಾರ ಅಧಿಕಾರಕ್ಕೆ ಬಂದಂತಾಗಿದೆ.

ತಿರುವನಂತಪುರಂನ ಕೇಂದ್ರೀಯ ಕ್ರೀಡಾಂಗಣದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ರಾಜೇಂದ್ರ ಅರ್ಲೇಕರ್, ಸತೀಸನ್ ಅವರಿಗೆ ಅಧಿಕಾರ ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು. ಮುಖ್ಯಮಂತ್ರಿಯವರೊಂದಿಗೆ ಐಯುಎಂಎಲ್‌ನ ಪಿಕೆಕುನ್ಹಾಲಿಕುಟ್ಟಿ, ಕಾಂಗ್ರೆಸ್‌ನ ರಮೇಶ್ ಚೆನ್ನಿತ್ತಲ ಮತ್ತು ಸನ್ನಿ ಜೋಸೆಫ್ ಸೇರಿದಂತೆ ಒಟ್ಟು ೨೧ ಸದಸ್ಯರ ಸಚಿವ ಸಂಪುಟ ಪ್ರಮಾಣ ವಚನ ಸ್ವೀಕರಿಸಿತು.

ಇನ್ನೊಂದೆಡೆ, ಕೇರಳದಲ್ಲಿ, ನೂತನ ಯುಡಿಎಫ್ ಸರ್ಕಾರ, ರಾಜ್ಯ ಸಾರಿಗೆ ಬಸ್‌ಗಳಲ್ಲಿ ಮಹಿಳಾ ಪ್ರಯಾಣಿಕರಿಗೆ ಉಚಿತ ಪ್ರಯಾಣವನ್ನು ಜಾರಿಗೆ ತರಲು ನಿರ್ಧರಿಸಿದೆ ಎಂದು ಮುಖ್ಯಮಂತ್ರಿ ವಿ.ಡಿ.ಸತೀಸನ್ ತಿಳಿಸಿದ್ದಾರೆ.

ನೂತನ ಸರ್ಕಾರದ ಮೊದಲ ಸಚಿವ ಸಂಪುಟ ಸಭೆಯ ನಂತರ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಅವರು, ಈ ತಿಂಗಳ ೨೧ ರಂದು ಹೊಸ ಸದಸ್ಯರ ಪ್ರಮಾಣ ವಚನ ಸ್ವೀಕಾರ ಮತ್ತು ಸ್ಪೀಕರ್ ಆಯ್ಕೆಗಾಗಿ ವಿಧಾನಸಭಾ ಅಧಿವೇಶನ ನಡೆಯಲಿದೆ. ಆಶಾ ಕಾರ್ಯಕರ್ತರು, ಅಂಗನವಾಡಿ ಕಾಯಕತೆಯರು ಮತ್ತು ಸಹಾಯಕರು ಹಾಗೂ ಅಡುಗೆ ಕೆಲಸಗಾರರಿಗೆ ವೇತನ ಹೆಚ್ಚಿಸಲಾಗುವುದು ಎಂದ ಅವರು ಮಾಹಿತಿ ನೀಡಿದರು.

---

ಪಶ್ಚಿಮ ಬಂಗಾಳ ಸಚಿವ ಸಂಪುಟವು ರಾಜ್ಯ ಸರ್ಕಾರಿ ನೌಕರರು, ಸರ್ಕಾರಿ ಮಂಡಳಿ ಮತ್ತು ನಿಗಮಗಳ ಸಿಬ್ಬಂದಿ, ರಾಜ್ಯ ಅನುದಾನಿತ ಸಂಸ್ಥೆಗಳು ಮತ್ತು ಶಿಕ್ಷಣ ಸಂಸ್ಥೆಗಳಿಗೆ ೭ನೇ ವೇತನ ಆಯೋಗದ ರಚನೆಗೆ ತಾತ್ವಿಕ ಅನುಮೋದನೆ ನೀಡಿದೆ.

ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅಧ್ಯಕ್ಷತೆಯಲ್ಲಿ ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯ ಸರ್ಕಾರ ಹಲವಾರು ನಿರ್ಧಾರಗಳನ್ನು ತೆಗೆದುಕೊಂಡಿತು.

ಸಭೆಯ ನಂತರ ಮಾಧ್ಯಮಗಳಿಗೆ ಮಾಹಿತಿ ನೀಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಸಮಾಜ ಕಲ್ಯಾಣ ಸಚಿವ ಅಗ್ನಿಮಿತ್ರ ಪಾಲ್, ರಾಜ್ಯಾದ್ಯಂತ ಮಹಿಳೆಯರಿಗೆ ಉಚಿತ ಸಾರಿಗೆ ಸೌಲಭ್ಯಕ್ಕೆ ಸಚಿವ ಸಂಪುಟ ಅನುಮೋದಿಸಿದೆ ಎಂದು ತಿಳಿಸಿದರು.

ಮುಂದಿನ ತಿಂಗಳು ೧ ರಿಂದ ಪ್ರಾರಂಭವಾಗಲಿರುವ ಅನ್ನಪೂರ್ಣ ಭಂಡಾರ್ ಯೋಜನೆಯಡಿಯಲ್ಲಿ, ಅರ್ಹ ಮಹಿಳೆಯರು ನೇರ ಪ್ರಯೋಜನ ವರ್ಗಾವಣೆಯ ಮೂಲಕ ಮೂರು ಸಾವಿರ ರೂಪಾಯಿಗಳನ್ನು ಪಡೆಯುತ್ತಾರೆ. ಯೋಜನೆಯಡಿಯಲ್ಲಿ ದಾಖಲಾತಿಗಾಗಿ ಮೀಸಲಾದ ಪೋರ್ಟಲ್ ಅನ್ನು ಪ್ರಾರಂಭಿಸಲಾಗುವುದು ಎಂದು ಅವರು ಮಾಹಿತಿ ನೀಡಿದರು.

---

ಸ್ವಿಟ್ಜರ್ಲ್ಯಾಂಡ್ ಜಿನಿವಾದಲ್ಲಿ ನಡೆಯುತ್ತಿರುವ ೭೯ನೇ ವಿಶ್ವ ಆರೋಗ್ಯ ಸಭೆಯ ಸಂದರ್ಭದಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಾಶ್ ನಡ್ಡಾ ಅವರು ಇಂದು ವಿಶ್ವ ಆರೋಗ್ಯ ಸಂಸ್ಥೆಯ ಮಹಾನಿರ್ದೇಶಕ ಡಾ.ಟೆಡ್ರೂಸ್ ಅದಾನೊಮ್ ಘೆಬ್ರಿಯಾಸಸ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಭಾರತದ ಆರೋಗ್ಯ ವಲಯದ ಸುಧಾರಣೆಗಳು ಮತ್ತು ಜಾಗತಿಕ ಆರೋಗ್ಯ ಪಾಲುದಾರಿಕೆಯಲ್ಲಿನ ನಾಯಕತ್ವವನ್ನು ಅವರು ಶ್ಲಾಘಿಸಿದ್ದಾರೆ. ಹಂಚಿಕೆಗಳ ಆದ್ಯತೆಗಳ ಕುರಿತು ಡಬ್ಲ್ಯೂಎಚ್‌ಒ ಜೊತೆ ಸಹಯೋಗವನ್ನು ಮತ್ತಷ್ಟು ಬಲಪಡಿಸುವ ಬದ್ಧತೆಯನ್ನು ವ್ಯಕ್ತಪಡಿಸಿದ್ದಾರೆ.

---

ಭಾರತದ ಶುದ್ಧ ಇಂಧನ ಪರಿವರ್ತನೆಯನ್ನು ಮುನ್ನಡೆಸುವ ಮಾರ್ಗಸೂಚಿಯನ್ನು ಚರ್ಚಿಸಲು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಇಂದು ಇಂಧನ ಸಚಿವಾಲಯದ ಅಧಿಕಾರಿಗಳು, ಅಂತಾರಾಷ್ಟ್ರೀಯ ಸೌರ ಒಕ್ಕೂಟ ಮತ್ತು ನವೀಕರಿಸಬಹುದಾದ ಇಂಧನ ಪರಿಸರ ವ್ಯವಸ್ಥೆಯ ಪ್ರಮುಖ ಪಾಲುದಾರರನ್ನು ಭೇಟಿಯಾದರು.

---

ಚೆನ್ನೈನ ಎಂ.ಎ.ಚಿದಂಬರಂ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಚೆನ್ನೈ ಸೂಪರ್ ಕಿಂಗ್ಸ್ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ.

---

ಪಶ್ಚಿಮ ಏಷ್ಯಾ ಬಿಕ್ಕಟ್ಟಿನಿಂದಾಗಿ ಆಮದು ಅಡಚಣೆಯ ಹೊರತಾಗಿಯೂ ದೇಶದಲ್ಲಿ ಸಂಸ್ಕರಣಾಗಾರಗಳು ಸಾಮಾನ್ಯವಾಗಿ ಕಾರ್ಯನಿರ್ವಹಿಸುತ್ತಿವೆ ಮತ್ತು ಭಾರತದಲ್ಲಿ ಸಾಕಷ್ಟು ಕಚ್ಚಾ ತೈಲ ದಾಸ್ತಾನುಗಳಿವೆ ಎಂದು ಕೇಂದ್ರ ಸರ್ಕಾರ ಹೇಳಿದೆ.

__________ ಮುಕ್ತಾಯ __________